ಕರ್ನಾಟಕ ವಿಧಾನಸಭೆ

(ಹದಿನಾಲ್ಕನೇ ವಿಧಾನಸಭೆ)

ಹದಿಮೂರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 10ನೇ ಫೆಬ್ರವರಿ, 2017

(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ.

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

ಆ) **<u>ದಿನಾಂಕ:09.02.2017ರ 3ನೇ ಪಟ್ಟಿಯಿಂದ ತಡೆಹಿಡಿಯಲಾಗಿರುವ ಚುಕ್ಕೆ ಗುರುತಿನ ಪ್ರಶ್ನೆಗಳು:–</u>**

1. ಶ್ರೀ ಎಲ್.ಎ. ರವಿಸುಬ್ರಹ್ಮಣ್ಯ	–ಸಂ. 31(339)	:	ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು
2. ಶ್ರೀ ಶಿವಾನಂದ ಎಸ್. ಪಾಟೀಲ	–ಸಂ. 34(428)		
3. ಶ್ರೀ ಮುನಿರತ್ನ	–ಸಂ. 40(411)		
4. ಶ್ರೀ ಹೆಚ್.ಕೆ. ಕುಮಾರಸ್ವಾಮಿ	–ಸಂ. 43(99)		

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

–2–

3. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

1. ಶ್ರೀ ಕಾಗೋಡು ತಿಮ್ಮಪ್ಪ (ಕಂದಾಯ ಸಚಿವರು) ಅವರು :-

ಅ) 2017ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. ಶ್ರೀ ಸಂತೋಷ್ ಎಸ್. ಲಾಡ್ (ಕಾರ್ಮಿಕ ಸಚಿವರು) ಅವರು :-

ಅ) 2017ನೇ ಸಾಲಿನ ಕನಿಷ್ಠ ಮಜೂರಿಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. ಶ್ರೀ ಎ. ಮಂಜು (ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು) ಅವರು:-

ಅ) 2017ನೇ ಸಾಲಿನ ಪ್ರಾಣಿಗಳಿಗೆ ಹಿಂಸಾಚಾರ ಮಾಡುವುದನ್ನು ತಡೆಗಟ್ಟುವ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

4. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಎಸ್.ಟಿ. ಸೋಮಶೇಖರ್** ಇವರು – “ ನಮ್ಮ ಗ್ರಾಮ ನಮ್ಮ ರಸ್ತೆ ” ಯೋಜನೆಯಡಿ ಬೆಂಗಳೂರು ದಕ್ಷಿಣ ತಾಲ್ಲೂಕಿನ ತಟ್ಟಗುಪ್ಪೆ-ತರಳು-ಗುಳಕಮಲೆ ರಸ್ತೆ ಅಭಿವೃದ್ಧಿಗೆ ಮಂಜೂರಾಗಿರುವ ಅನುದಾನದಲ್ಲಿ ಡಾಂಬರು ಕಾಮಗಾರಿ ಕೈಗೊಳ್ಳದೇ ಅಲ್ಲಿನ ಗ್ರಾಮಸ್ಥರುಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

2. **ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ, ಸಿ.ಎನ್. ಬಾಲಕೃಷ್ಣ ಮತ್ತು ಹೆಚ್.ಕೆ. ಕುಮಾರಸ್ವಾಮಿ** ಇವರುಗಳು – ಹಾಸನ ಜಿಲ್ಲೆಯ ಹೊಳೆನರಸೀಪುರದಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿರುವ ಖಾಲಿ ಜಾಗದಲ್ಲಿ ಒಳಾಂಗಣ ಮತ್ತು ಹೊರಾಂಗಣ ಕ್ರೀಡಾಂಗಣದ ನಿರ್ಮಾಣಕ್ಕಾಗಿ ಅವಶ್ಯಕ ಅನುದಾನದ ಮಂಜೂರಾತಿಗೆ ನಿರ್ದೇಶನವಿದ್ದರೂ ಸಹ ಯಾವುದೇ ಕ್ರಮ ಕೈಗೊಳ್ಳದಿರುವ ಬಗ್ಗೆ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರ ಗಮನ ಸೆಳೆಯುವುದು.

3. **ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ, ಹೆಚ್.ಡಿ. ರೇವಣ್ಣ ಮತ್ತು ಹೆಚ್.ಕೆ ಕುಮಾರಸ್ವಾಮಿ** ಇವರುಗಳು – ಹಾಸನದ ಗಂಧದ ಕೋಟಿಯಲ್ಲಿ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲು ಮುಖ್ಯಮಂತ್ರಿಗಳ ನಿರ್ದೇಶನವಿದ್ದರೂ ಸಹ ಈವರೆವಿಗೂ ಯಾವುದೇ ಕ್ರಮ ಕೈಗೊಳ್ಳದಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

4. **ಶ್ರೀ ಎನ್. ಚಲುವರಾಯಸ್ವಾಮಿ** ಇವರು – ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯಕ್ಕೆ ಯು.ಜಿ.ಸಿ. ಮಾನ್ಯತೆ ದೊರಕಿಸಿಕೊಟ್ಟು ವಿದ್ಯಾರ್ಥಿಗಳು ಪಡೆದಿರುವ ಪದವಿಗಳಿಗೆ ಮಾನ್ಯತೆ ದೊರಕಿಸಿಕೊಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

5. **ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ ಮತ್ತು ಡಾ॥ ನಾರಾಯಣಗೌಡ** ಇವರುಗಳು – ಹೇಮಾವತಿ ಎಡದಂಡೆ ನಾಲೆಯ ಸರಪಳಿ 72.26 ಕಿ.ಮೀ. ನಿಂದ 214.30 ಕಿ.ಮೀ. ವರೆಗಿನ ನಾಲೆಯನ್ನು ಆಧುನೀಕರಣಗೊಳಿಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

6. **ಶ್ರೀ ಸಿ.ಟಿ. ರವಿ** ಇವರು – ರಾಜ್ಯದಲ್ಲಿನ ಹಲವು ನಗರಾಭಿವೃದ್ಧಿ ಪ್ರಾಧಿಕಾರಗಳ ವ್ಯಾಪ್ತಿಯಲ್ಲಿ ನಿವೇಶನ ಹಂಚಿಕೆ ಮತ್ತು ದರಗಳ ನಿಗದಿಗೆ ಸೂಕ್ತ ಮಾರ್ಗಸೂಚಿ ರೂಪಿಸುವುದು ಹಾಗೂ ನಿವೇಶನ ಹಂಚಿಕೆಯಲ್ಲಿ ಮಹಿಳಾ ಸಮಾಜ ಸೇವಾ ಸಂಘಟನೆಗಳಿಗೆ ಆದ್ಯತೆ/ರಿಯಾಯತಿಗಳನ್ನು ಒದಗಿಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

7. **ಶ್ರೀ ವಿ. ಸುನೀಲ್ ಕುಮಾರ್** ಇವರು – ಉಡುಪಿ ಜಿಲ್ಲೆ ಕಾರ್ಕಳ ತಾಲ್ಲೂಕಿನಲ್ಲಿ ಹರಿಯುತ್ತಿರುವ ಎಣ್ಣೆಹೊಳೆ ನದಿಗೆ ಅಣೆಕಟ್ಟು ನಿರ್ಮಿಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

8. **ಶ್ರೀ ಎನ್.ಹೆಚ್. ಕೋನರಡ್ಡಿ** ಇವರು – ಸರ್ಕಾರದ ಘೋಷಣೆಯಂತೆ ರಾಜ್ಯದಲ್ಲಿ ಹೊಸ ತಾಲ್ಲೂಕುಗಳನ್ನು ರಚನೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

9. **ಶ್ರೀ ಕೆ.ಜಿ. ಬೋಪಯ್ಯ** ಇವರು – ಕೊಡಗು ಜಿಲ್ಲೆ ವಿರಾಜಪೇಟೆ ತಾಲ್ಲೂಕಿನ ಪಿ. ಶೆಟ್ಟಿಗೇರಿ ಗ್ರಾಮದಲ್ಲಿ ಕೊಂಗಣ ಹೊಳೆ ತಿರುವು ಯೋಜನೆಯನ್ನು ರದ್ದು ಪಡಿಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

10. **ಶ್ರೀ ಪಿ. ರಾಜೀವ್** ಇವರು – ಕುಡಚಿ ಮತ ಕ್ಷೇತ್ರದ ಪಾಲಬಾವಿ ಗ್ರಾಮದಲ್ಲಿ ಬಹು ಹಳ್ಳಿಗಳ ಕುಡಿಯುವ ನೀರಿನ ಯೋಜನೆಯ ಕಾಮಗಾರಿಯನ್ನು ಪುನಃ ಪ್ರಾರಂಭ ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

11. **ಶ್ರೀ ಹೆಚ್.ಕೆ. ಕುಮಾರಸ್ವಾಮಿ** ಇವರು – ಕಾಡಾನೆ ಮತ್ತಿತರ ವನ್ಯ ಜೀವಿಗಳಿಂದ ಗಾಯಾಳು ನೇರವಾಗಿ ಖಾಸಗಿ ಆಸ್ಪತ್ರೆಗೆ ದಾಖಲಾದಾಗ ತಗಲುವ ವೆಚ್ಚ ಹಾಗೂ ಮುಂಗಡ ಹಣ ಪಾವತಿಸುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

12. **ಶ್ರೀ ಹೆಚ್. ರಾಜು ಅಲಗೂರ್** ಇವರು – ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನ ಚಡಚಣವನ್ನು ತಾಲ್ಲೂಕು ಕೇಂದ್ರವನ್ನಾಗಿ ಘೋಷಣೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. **ಶ್ರೀಯುತರುಗಳಾದ ಎನ್.ಹೆಚ್. ಕೋನರಡ್ಡಿ, ಕೆ.ಎಂ. ಶಿವಲಿಂಗೇಗೌಡ, ಬಿ. ಆರ್. ಯಾವಗಲ್, ಮತ್ತು ಎಂ.ಜೆ. ಅಪ್ಪಾಜಿ** ಇವರುಗಳು – ಮಹದಾಯಿ ಕಳಸಾ ಬಂಡೂರಿ ನಾಲಾ ಜೋಡಣೆಯ ಯೋಜನೆಯನ್ನು ಜಾರಿಗೆ ತರುವ ವಿಚಾರದಲ್ಲಿ ಹೋರಾಟ ಮಾಡುತ್ತಿದ್ದ ರೈತರ ಮೇಲೆ ದಾಖಲಿಸಲಾಗಿದ್ದ ಮೊಕದ್ದಮೆಗಳನ್ನು ಹಿಂಪಡೆಯದಿರುವುದರಿಂದ ರೈತರಿಗೆ ಉಂಟಾಗಿರುವ ತೊಂದರೆಯ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

2. **ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ, ಕೆ.ಎಂ. ಶಿವಲಿಂಗೇಗೌಡ ಮತ್ತು ಹೆಚ್.ಎಸ್. ಪ್ರಕಾಶ್** ಇವರುಗಳು – ತೀವ್ರ ಮಳೆ ಅಭಾವದಿಂದ ಹಾಗೂ ಅಂತರ್ ಜಲ ಕೊರತೆಯಿಂದ ಕುಡಿಯುವ ನೀರಿಗೆ ತುಂಬ ತೊಂದರೆಯಾಗಿರುವ ಹಾಸನ ಜಿಲ್ಲೆಯ 7 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದ್ದರೂ ಸಹ ಹಲವಾರು ಗ್ರಾಮಗಳಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲು ಯಾವುದೇ ಕ್ರಮವನ್ನು ಕೈಗೊಳ್ಳದೇ ಇರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm